ಕರ್ನಾಟಕ ಸರ್ಕಾರ

**ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ**
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ,
ಕಾಳಿದಾಸ ಮಾರ್ಗ, ಗಾಂಧಿನಗರ, ಬೆಂಗಳೂರು-560009.

ಸಂಖ್ಯೆ:ಕಪಿಆರ್‌ಸಿ-ಜಿಪಿಎ/134/2024 ದಿನಾಂಕ:26.06.2024

**ಇವರಿಗೆ,**
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು.

ಮಾನ್ಯರೇ,

ವಿಷಯ: ರಾಜ್ಯದ ಗ್ರಾಮ ಪಂಚಾಯತಿಗಳಲ್ಲಿ ಖಾಲಿಯಾಗಿರುವ ಕರವಸೂಲಿಗಾರರರು, ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್ ರರು, ವಾಟರ್ ಆಪರೇಟರ್ ಹಾಗೂ ಸ್ವಚ್ಛತಾಗಾರರ ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳುವ ಕುರಿತು.

ಉಲ್ಲೇಖ: 1.ಸರ್ಕಾರದ ಅಧಿಸೂಚನೆ ಸಂಖ್ಯೆ : ಗ್ರಾಅಪ 886 ಗ್ರಾಪಂಕಾ 2016, ದಿನಾಂಕ:29.09.2020.
2. ಆಯುಕ್ತಾಲಯದ ಪತ್ರದ ಸಂಖ್ಯೆ : ಕ.ಪಿ.ಆರ್.ಸಿ-ಜಿ.ಪಿ.ಎ/315-2022 ದಿನಾಂಕ : 17.01.2023.

*****

ಮೇಲ್ಕಂಡ ವಿಷಯ ಹಾಗೂ ಉಲ್ಲೇಖ(1)ಕ್ಕೆ ಸಂಬಂಧಿಸಿದಂತೆ, ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಸಿಬ್ಬಂದಿಯ ಸ್ವರೂಪ, ವೇತನ ಶ್ರೇಣಿಗಳು, ನೇಮಕಾತಿ ವಿಧಾನದ ಮತ್ತು ಸೇವಾ ಷರತ್ತುಗಳ ಬಗ್ಗೆ ರಚಿಸಿರುವ ನಿಯಮಗಳಲ್ಲಿ "ಪ್ರತಿ ಗ್ರಾಮ ಪಂಚಾಯತಿಯ ಹುದ್ದೆಗಳ ಸಂಖ್ಯೆಯನ್ನು ಪ್ರತ್ಯೇಕವಾದ ಸರ್ಕಾರಿ ಆದೇಶದಲ್ಲಿ ಒದಗಿಸಲಾಗುತ್ತದೆ" ಎಂದು ತಿಳಿಸಲಾಗಿದ್ದು, ಇದರ ಅನುಗುಣವಾಗಿ ಉಲ್ಲೇಖ(2) ರಲ್ಲಿ ಪ್ರಸ್ತುತ ರಾಜ್ಯದ ಗ್ರಾಮ ಪಂಚಾಯಿತಿಗಳಿಗೆ ಸಿಬ್ಬಂದಿ ಸಂಖ್ಯೆಯನ್ನು ನಿಗದಿಪಡಿಸುವ ಬಗ್ಗೆ ನಿಯಮಗಳಲ್ಲಿ ತಿದ್ದುಪಡಿ ತರುವ ಪ್ರಸ್ತಾವನೆಯು ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿರುವುದರಿಂದ, ಎಲ್ಲಾ ಜಿಲ್ಲಾ ಪಂಚಾಯತಿಗಳು ಮುಂದಿನ ಆದೇಶ ಬರುವವರೆಗೂ ಗ್ರಾಮ ಪಂಚಾಯತಿ ಸಿಬ್ಬಂದಿಗಳ ಸಂಖ್ಯೆಯನ್ನು ನಿಗದಿಪಡಿಸುವ ಕುರಿತಾಗಿ ಯಾವುದೇ ಕ್ರಮ ಕೈಗೊಳ್ಳದಂತೆ ಹಾಗೂ ಮುಂದಿನ ಆದೇಶ ನಿರೀಕ್ಷಿಸುವಂತೆ ತಿಳಿಸಿರುತ್ತದೆ.

ಮುಂದುವರೆದು, ಗ್ರಾಮ ಪಂಚಾಯತಿ ಸಿಬ್ಬಂದಿಗಳಾದ 1) ಕರವಸೂಲಿಗಾರರು 2) ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್‌ರರು 3) ವಾಟರ್ ಆಪರೇಟರ್ ಹಾಗೂ 4) ಸ್ವಚ್ಛತಾಗಾರರ ಹುದ್ದೆಗಳಿಗೆ ಜಿಲ್ಲಾ ಪಂಚಾಯತಿಯಿಂದ ಈಗಾಗಲೇ ಅನುಮೋದನೆ ಹೊಂದಿರುವ ಸದರಿ ನೌಕರರ ವಯೋನಿವೃತ್ತಿಯಿಂದ, ಮುಂಬಡ್ತಿಯಿಂದ ಅಥವಾ ಮರಣಹೊಂದಿರುವ ಕಾರಣಗಳಿಂದಾಗಿ ಖಾಲಿಯಾಗಿದ್ದಲ್ಲಿ, ಗ್ರಾಮ ಪಂಚಾಯತಿಯ ಸಿಬ್ಬಂದಿ ವರ್ಗದ ಮಾದರಿಯಲ್ಲಿ ಖಾಲಿಯಾದ ಈ ಮೇಲಿನ ನಾಲ್ಕು ವೃಂದದ ಹುದ್ದೆಗಳಲ್ಲಿ ಯಾರೂ ಕಾರ್ಯನಿರ್ವಹಿಸದೇ ಇದಲ್ಲಿ, ಸದರಿ ಹುದ್ದೆಗೆ ಒಂದು ಸಿಬ್ಬಂದಿಯನ್ನು ಸರ್ಕಾರದ ಅಧಿಸೂಚನೆ ಸಂ: ಗ್ರಾಅಪ 886 ಗ್ರಾಪಂಕಾ 2016 ದಿನಾಂಕ:29.09.2020 ರಲ್ಲಿ ಸೂಚಿಸಿರುವಂತೆ ನಿಯಮಾನುಸಾರ ನೇಮಕಾತಿ ಮಾಡಿಕೊಳ್ಳಲು ಎಲ್ಲಾ ಜಿಲ್ಲಾ ಪಂಚಾಯತಿಯ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳಿಗೆ ತಿಳಿಸಿದೆ. ಮುಂದುವರೆದು, ನೇಮಕಾತಿಯ ಮೀಸಲಾತಿಯನ್ನು ಕಡ್ಡಾಯವಾಗಿ ಅನುಸರಿಸಲು ಕೋರಿದೆ.

ತಮ್ಮ ವಿಶ್ವಾಸಿ,

(ಸಹಿ)

ನಿರ್ದೇಶಕರು (ಆ-1)
ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ.

ಪ.ತಿ: